ಹಾಗೂ ಯೋಜನಾ ಆಯೋಗದ ಉಪಾಧ್ಯಕ್ಷರಿಗೆ ಪತ್ರವನ್ನು ಮತ್ತು ಮುಖತ: ಭೇಟಿಯಾಗಿ ನಾವು ಮಾತನಾಡಿದ್ದೇವೆ. ಕಳೆದ ವರ್ಷ ಅಕ್ಟೋಬರ್ ತಿಂಗಳಲ್ಲಿ ಗುಲ್ಬರ್ಗಾದಲ್ಲಿ ಕರ್ನಾಟಕ ಕೇಂದ್ರ ವಿಶ್ವವಿದ್ಯಾಲಯದ ಉದ್ಘಾಟನೆಗೆ ಬಂದಾಗ ನಾನು ಅವರ ಹತ್ತಿರ ಮತ್ತೊಮ್ಮೆ ವೈಯಕ್ತಿಕವಾಗಿ ಮಾತನಾಡಿದ್ದೆ. ಕಾರ್ಯಕ್ರಮದ ನಂತರ ಅವರು ಒಂದು ಪತ್ರಿಕಾ ಸಂದರ್ಶನದಲ್ಲಿ ಕರ್ನಾಟಕಕ್ಕೆ ಒಂದು ಐ.ಐ.ಟಿ. ಅಥವಾ ಐ.ಎ.ಎಂ. ಅನ್ನು ಕೊಡುವಂಥ ವಿಚಾರ ಇದೆ. 12ನೇ ಯೋಜನಾವಧಿಯಲ್ಲಿ ಕೊಡಲಾಗುವುದೆಂಬ ಒಂದು ಮುನ್ಸೂಚನೆಯನ್ನು ಕೊಟ್ಟಿದ್ದರು. ಆನಂತರ ಸುಮಾರು 100 ಕ್ಕಿಂಥ ಹೆಚ್ಚು ಜನ ಸಹಿ ಮಾಡಿ ಬೆಳಗಾವಿಯಲ್ಲಿ ಐ.ಐ.ಟಿ. ಸ್ಥಾಪಿಸಬೇಕೆಂದು ಪತ್ರ ಬರೆದಿದ್ದು ನಿಜ. ಮತ್ತೆ ಹಿಂದಿನ ಮುಖ್ಯ ಮಂತ್ರಿಯವರು ಮಾರ್ಚ್ 2010 ರಲ್ಲಿ ಬೆಳಗಾಂ ಅನ್ನು ಉಲ್ಲೇಖಿಸಿ ಬೆಳಗಾವಿಯಲ್ಲಿಯೇ ಆಗಬೇಕೆಂದು ಒಂದು ಪತ್ರ ಕೂಡ ಬರೆದಿದ್ದರು. ಇದೆಲ್ಲದಕ್ಕೂ ಸೇರಿ ಒಂದು ಉತ್ತರ ಬಂದಿದೆ. ಮಾನ್ಯ ಪ್ರಧಾನ ಮಂತ್ರಿಯವರು ಸ್ವತ: ಸಹಿ ಮಾಡಿ ಕರ್ನಾಟಕದಲ್ಲಿ ಒಂದು ಐ.ಐ.ಟಿ. ಮಾಡಬೇಕೆಂದು ತಾವೆಲ್ಲರು ಮನವಿ ಮಾಡಿಕೊಂಡಿರುವುದು ಬಂದಿದೆ. ಅದನ್ನು ನಾವು ಪರಿಶೀಲನೆ ಮಾಡುತ್ತಿದ್ದೇವೆಂಬ ಉತ್ತರವನ್ನು ಕೊಟ್ಟಿದ್ದಾರೆ. ಬೆಳಗಾವಿ ಅಥವಾ ಎಲ್ಲಿ ಮಾಡಬೇಕೆಂಬ ಬಗ್ಗೆ ಒಂದು ಪೂರ್ವ ನಿರ್ಧಾರಕ್ಕೆ ಬಂದಿಲ್ಲ. ಬೆಳಗಾವಿಯ ಒಂದು ಜಾಗ ಮತ್ತು ಇತ್ಯಾದಿಗಳ ಬಗ್ಗೆ ನಮ್ಮ ತಯಾರಿಗಳನ್ನು ನಾವು ಮಾಡಿದ್ದೇವೆ. ಇದರ ಬಗ್ಗೆ ಪ್ರಯತ್ನವನ್ನು ಮುಂದುವರಿಸುತ್ತೇವೆಂದು ಈ ಸಂದರ್ಭದಲ್ಲಿ ಹೇಳುವುದಕ್ಕೆ ಬಯಸುತ್ತೇನೆ.

ಆ) ಚುಕ್ಕೆ ಗುರುತ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು:

ಶ್ರೀ ಎಸ್.ಸುರೇಶ್ ಕುಮಾರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ನಗರಾಭಿವೃದ್ಧಿ ಇಲಾಖೆ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ:07–12–2011ರ 2ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 86 ಪ್ರಶ್ನೆಗಳ ಪೈಕಿ 63 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ಅನುಬಂಧ–1

ಇ) ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು:

ಶ್ರೀ ಎಸ್.ಸುರೇಶ್ ಕುಮಾರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ನಗರಾಭಿವೃದ್ಧಿ ಇಲಾಖೆ ಸಚಿವರು)(ಮಾನ್ಯ ಮುಖ್ಯಮಂತ್ರಿಯವರ ಪರವಾಗಿ):–

ಮಾನ್ಯ ಅಧ್ಯಕ್ಷರೆ, ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2010ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಪಂಚಾಯತ್ ರಾಜ್ ಸಂಸ್ಥೆಗಳ ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ಈ) ಕಾರ್ಯದರ್ಶಿಗಳ ವರದಿ:– ಮಾನ್ಯ ಅಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ(ತಿದ್ದುಪಡಿ) ವಿಧೇಯಕ, 2011ನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2011
(2011ರ ವಿಧಾನ ಪರಿಷತ್ತಿನ ವಿಧೇಯಕ ಸಂಖ್ಯೆ 7)
ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿ)

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ, 1994ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ, 1994ನ್ನು (1994ರ ಕರ್ನಾಟಕ ಅಧಿನಿಯಮ 39) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:–

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ:– (1) ಈ ಅಧಿನಿಯಮವನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2011 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.